# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೃಷಿ ಇಲಾಖೆಯಲ್ಲಿ 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನೆಗಳನ್ನು 2022-23ನೇ ಸಾಲಿಗೆ ಮುಂದುವರೆಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಕೃ ಇ-ಕೃಯೋಕಾ-108/2022, ದಿ:17-04-2021
2. ಸರ್ಕಾರದ ಆದೇಶ ಸಂಖ್ಯೆ:AGRI-AMS/33/2021(P-1), ದಿ: 30-07-2021
3. ಸರ್ಕಾರದ ಆದೇಶ ಸಂಖ್ಯೆ: ಕೃಇ 73 ಕೃಕೈಉ 2021, ದಿನಾಂಕ:03-08-2021
4. ಸರ್ಕಾರದ ಆದೇಶ ಸಂಖ್ಯೆ:AGRI-AML147/2021, ದಿ:23-08-2021.
5. ಸರ್ಕಾರದ ಆದೇಶ ಸಂಖ್ಯೆ: ಕೃಮಸ/2/2020, ದಿನಾಂಕ:31-07-2021
6. ಸರ್ಕಾರದ ಆದೇಶ ಸಂಖ್ಯೆ:AGRI-AFT/14/2021, ದಿನಾಂಕ:18-09-2021
7. ಸರ್ಕಾರದ ಆದೇಶ ಸಂಖ್ಯೆ: ಕೃಇ-ಕೃಯೋಕಾ -141/2021, ದಿ:31-12-2021
8. ಸರ್ಕಾರದ ಆದೇಶ ಸಂಖ್ಯೆ:AGRI-AFT/26/2021, ದಿನಾಂಕ:14-01-2022
9. ಸರ್ಕಾರದ ಆದೇಶ ಸಂಖ್ಯೆ: ಕೃಮಸ-87/2021, ದಿನಾಂಕ:17-01-2022
10. ಸರ್ಕಾರದ ಆದೇಶ ಸಂಖ್ಯೆ:AGRI-ASC/73/2021(P-3), ದಿನಾಂಕ:18-01-2022
11. ಸರ್ಕಾರದ ಆದೇಶ ಸಂಖ್ಯೆ: ಕೃಇ-ಕೃಯೋಕಾ-119/2021, ದಿನಾಂಕ:4-08-2021
12. ಸರ್ಕಾರದ ಆದೇಶ ಸಂಖ್ಯೆ:AGRI-AFT/12/2022, ದಿ:25-02-2022
13. ಸರ್ಕಾರದ ಆದೇಶ ಸಂಖ್ಯೆ:ಕೃಇ ಕ-95/2021, ದಿನಾಂಕ:18-02-2022.
14. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ರವರ ಪತ್ರ ಸಂಖ್ಯೆ: ಜಅಇ/ ಯೋವಿ /ಚಾ.ಯೋ.ಮುಂ/122/2021-22, ದಿ:21-03-2022
15. ಆಯುಕ್ತರು, ಕೃಷಿ ಇಲಾಖೆ ರವರ ಪತ್ರ ಸಂಖ್ಯೆ:ಪಿಎಲ್ ಎನ್/ಚಾ.ಯೋ /ಆಯವ್ಯಯ /2022-23, ದಿನಾಂಕ:07-04-2022

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯ ರಾಜ್ಯವಲಯ ಯೋಜನೆಗಳು, ಕೇಂದ್ರ ಪುರಸ್ಕೃತ ಯೋಜನೆಗಳು ಮತ್ತು ಬಾಹ್ಯನುದಾನಿತ ಯೋಜನೆಗಳನ್ನು 2021-22ನೇ ಸಾಲಿಗೆ ಕೆಲವೊಂದು ಷರತ್ತುಗಳಿಗೊಳಪಟ್ಟು ಮುಂದುವರೆಸಿ ಆದೇಶಿಸಿದೆ.

..2

Scanned by CamScanner

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಆದೇಶದಲ್ಲಿ ಕೃಷಿ ಇಲಾಖೆಯಿಂದ ವಿತರಿಸಲಾಗುವ ಕೃಷಿ ಯಂತ್ರೋಪಕರಣ(Agricultural Mechanisation) ಹಾಗೂ ಕೃಷಿ ಸಂಸ್ಕರಣಾ ಘಟಕಗಳಿಗೆ ಸಂಬಂಧಿಸಿದಂತೆ, ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ನೀಡುವ ಸಹಾಯಧನದ ಮಾದರಿಯನ್ನು ಹಿಂದಿನ ಸಾಲಿನ ಸಹಾಯಧನದ ಮಾದರಿಯಂತೆಯೇ ಮುಂದುವರೆಸಲು ಮಂಜೂರಾತಿಯನ್ನು ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ 50 ರನ್ವಯ ಕೃಷಿ ಯಾಂತ್ರೀಕರಣ ಯೋಜನೆಯಡಿ 25 PTO-HP ವರೆಗಿನ ಸಣ್ಣ ಟ್ರ್ಯಾಕ್ಟರ್‌ಗಳಿಗೆ ನೀಡುತ್ತಿರುವ ಸಹಾಯಧನವನ್ನು 45 PTO-HP ವರೆಗೆ ವಿಸ್ತರಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (4) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿಗೆ ಬೆಳೆ ಸಮೀಕ್ಷೆ ಯೋಜನೆಯನ್ನು ರೂ.49.00 ಕೋಟಿಗಳ ವೆಚ್ಚದಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಹಾಗೂ 2021-22ನೇ ಸಾಲಿನಿಂದ ಬೆಳೆ ಸಮೀಕ್ಷೆ ಯೋಜನೆಯನ್ನು ಮುಂದುವರೆದ ಯೋಜನೆ (ಚಾಲ್ತಿ ಯೋಜನೆ) ಎಂದು ಪರಿಗಣಿಸಿ, ಸದರಿ ಯೋಜನೆಯನ್ನು ಪ್ರತಿ ವರ್ಷ ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (5) ರಲ್ಲಿ ಓದಲಾದ ಆದೇಶದಲ್ಲಿ "ರೈತ, ನೇಕಾರ ಮತ್ತು ಮೀನುಗಾರರ ಉತ್ಪನ್ನಗಳ ಉತ್ಪಾದನೆ ಹಾಗೂ ಮಾರಾಟಕ್ಕೆ 750 ಅಮೃತ ರೈತ/ಮೀನುಗಾರರ/ನೇಕಾರರ ಉತ್ಪಾದಕರ ಸಂಸ್ಥೆಗಳನ್ನು ಮೂರು ವರ್ಷಗಳ ಅವಧಿಯಲ್ಲಿ ಅಂದಾಜು ರೂ.225 ಕೋಟಿಗಳ ವೆಚ್ಚದಲ್ಲಿ ಸ್ಥಾಪಿಸಲು" ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (6) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಆತ್ಮ ನಿರ್ಭರ ಭಾರತ ಅಭಿಯಾನ ಯೋಜನೆಯಡಿ ಕೃಷಿ ನವೋದ್ಯಮಗಳ ಮತ್ತು ಸಣ್ಣ ಹಾಗೂ ಮದ್ಯಮ ಕೈಗಾರಿಕೆಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲು ಹಾಗೂ ಸ್ಥಳೀಯ ಉತ್ಪನ್ನಗಳ ಸಂಸ್ಕರಣೆಗೆ ಉತ್ತೇಜನ ನೀಡಲು, ವಿಜಯಪುರ ಜಿಲ್ಲೆಯ ಇಟ್ಟಂಗಿಹಾಳ ಗ್ರಾಮದಲ್ಲಿ ಆತ್ಮನಿರ್ಭರ ಭಾರತ ಅಭಿಯಾನ ಯೋಜನೆಯಡಿ ಆಹಾರ ಪಾರ್ಕ ಅನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (PPP Mode) ಸ್ಥಾಪಿಸಲು ಸರ್ಕಾರವು ಮಂಜೂರಾತಿಯನ್ನು ನೀಡಿ ಆದೇಶಿಸಿದೆ.

..3

Scanned by CamScanner

ಮೇಲೆ ಕ್ರಮ ಸಂಖ್ಯೆ (7) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನ ಆರ್ಥಿಕ ವರ್ಷದಿಂದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರದ ಆದೇಶ ಸಂಖ್ಯೆ:AGRI-AML/141/2021, ದಿನಾಂಕ:07-08-2021 ರಲ್ಲಿ ನಮೂದಿಸಿದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ರೈತರ ಮಕ್ಕಳ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ಕೋರ್ಸ್ ಗಳ ಮುಂದೆ ಸಮೂದಿಸಿರುವಂತೆ ವಿದ್ಯಾರ್ಥಿ ವೇತನ ಸೌಲಭ್ಯವನ್ನು ನೀಡಲು ಹಾಗೂ ಪ್ರೌಢಶಿಕ್ಷಣ (8 ರಿಂದ 10) ನೇ ತರಗತಿಯವರೆಗೆ, ವ್ಯಾಸಂಗ ಮಾಡುತ್ತಿರುವ ರೈತ ಕುಟುಂಬದ ಹೆಣ್ಣು ಮಕ್ಕಳಿಗೆ ವಾರ್ಷಿಕವಾಗಿ ತಲಾ ರೂ.2000/-ಗಳ ವಿದ್ಯಾರ್ಥಿ ವೇತನ ಸೌಲಭ್ಯವನ್ನು ವಿಸ್ತರಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (8) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ 53ರನ್ವಯ ಆತ್ಮ ನಿರ್ಭರ ಭಾರತ ಅಭಿಯಾನ ಯೋಜನೆ ಅಡಿಯಲ್ಲಿ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣೆ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ ಹಾಗೂ ಇತರ ಕಾರ್ಯಕ್ರಮಗಳಡಿಯಲ್ಲಿ ನೀಡಲಾಗುತ್ತಿರುವ ಶೇ.35ರಷ್ಟು ಸಹಾಯಧನವನ್ನು ಶೇ.50ರಷ್ಟು ಹೆಚ್ಚಿಸಲು ರಾಜ್ಯ ಸರ್ಕಾರವು ಶೇ.15ರಷ್ಟು ಹೆಚ್ಚುವರಿ ಸಹಾಯಧನವನ್ನು ನೀಡಲು ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (9) ರಲ್ಲಿ ಓದಲಾದ ಆದೇಶದಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಮೂಲಕ ರೈತರಿಗೆ ಅನುಕೂಲವಾಗುವಂತಹ ತಾಂತ್ರಿಕತೆಗಳನ್ನು ಅಭಿವೃದ್ಧಿಪಡಿಸುವ ಬಗ್ಗೆ ಪರಿಶೀಲಿಸಲು ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರ ಸಮಿತಿಯನ್ನು ಕೆಲವು ಜವಾಬ್ದಾರಿಗಳೊಂದಿಗೆ ರಚಿಸಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (10) ರಲ್ಲಿ ಓದಲಾದ ಆದೇಶದಲ್ಲಿ ಕೃಷಿ ಇಲಾಖೆಯಲ್ಲಿ ಕೃಷಿ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಸೆಕೆಂಡರಿ ಕೃಷಿ ನಿರ್ದೇಶನಾಲಯವನ್ನು ಸ್ಥಾಪಿಸಲಾಗಿರುತ್ತದೆ ಹಾಗೂ ಕೃಷಿ ಸಂಬಂಧಿತ ಉಪ ಉತ್ಪನ್ನಗಳ ಮೌಲ್ಯವರ್ಧನೆ ಮತ್ತು ಇತರೆ ಸೆಕೆಂಡರಿ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡಲು ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (11) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನ ರಾಜ್ಯ ಆಯವ್ಯಯ ಭಾಷಣದ ಕಂಡಿಕೆ-52ರ ಘೋಷಣೆಯಂತೆ "ರಾಜ್ಯದಲ್ಲಿ ದ್ವಿದಳ ಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸಲು ಬಿತ್ತನೆ ಬೀಜ ಹಾಗೂ ಹಸಿರೆಲೆ ಗೊಬ್ಬರ ವಿತರಣೆ ಮಾಡಿ ಸಾವಯವ

..4

Scanned by CamScanner

ಇಂಗಾಲ ಹೆಚ್ಚಿಸುವ ಅಭಿಯಾನ ಕಾರ್ಯಕ್ರಮ" ವನ್ನು ಕೆಲವೊಂದು ಅಂಶಗಳನ್ವಯ ಅನುಷ್ಠಾನಗೊಳಿಸಲು ಸರ್ಕಾರದ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (12) ರಲ್ಲಿ ಓದಲಾದ ಆದೇಶದಲ್ಲಿ ರಾಜ್ಯದಲ್ಲಿ 2021-22ನೇ ಸಾಲಿನಿಂದ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಜಲಾನಯನ ಅಭಿವೃದ್ಧಿ ಘಟಕ-2.0 ಯೋಜನೆಯನ್ನು ಆಯ್ದ 57 ತಾಲ್ಲೂಕುಗಳಲ್ಲಿ 2.75 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ರೂ.642.26 ಕೋಟಿ ಯೋಜನಾ ಮೊತ್ತದಲ್ಲಿ ಅನುಷ್ಠಾನಗೊಳಿಸಲು ಹಾಗೂ ಸದರಿ ಯೋಜನೆಯನ್ನು ಜಾರಿಗೊಳಿಸಲು ಅಗತ್ಯವಿರುವ ರೂ.256.91 ಕೋಟಿ ಅನುದಾನವನ್ನು ರಾಜ್ಯ ಸರ್ಕಾರದಿಂದ ಅನುಮೋದನೆ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (13) ರಲ್ಲಿ ಓದಲಾದ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-46ರ ಘೋಷಣೆಯಂತೆ, ಜನರಿಗೆ ಆರೋಗ್ಯಕರ ಹಾಗೂ ರಾಸಾಯನಿಕ ಮುಕ್ತ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳನ್ನು ದೊರಕಿಸಲು ಹಾಗೂ ಸಾವಯವ ಕೃಷಿಯನ್ನು ಉತ್ತೇಜಿಸಲು ರೂ.500.00 ಕೋಟಿಗಳ ಯೋಜನೆಯನ್ನು ಅನುಷ್ಠಾನಗೊಳಿಸಲು, ಸಾವಯವ ಕೃಷಿ ಮತ್ತು ಸಿರಿಧಾನ್ಯಗಳ ಕಾರ್ಯಕ್ರಮಗಳು, ಲೆಕ್ಕಶೀರ್ಷಿಕೆ:2401-00-104-0-12 ರಡಿ ಲಭ್ಯವಿರುವ ರೂ.50.00ಕೋಟಿಗಳ (ರೂಪಾಯಿಗಳು ಐವತ್ತು ಕೋಟಿಗಳು ಮಾತ್ರ) ಅನುದಾನದಲ್ಲಿ ವೆಚ್ಚವನ್ನು ಭರಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

ಮೇಲೆ ಕ್ರಮ ಸಂಖ್ಯೆ (14) ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ರವರು 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ರಾಜ್ಯವಲಯದ ವಿವಿಧ ಯೋಜನಾ ಕಾರ್ಯಕ್ರಮಗಳನ್ನು 2022-23ನೇ ಸಾಲಿಗೆ ಮುಂದುವರೆಸಲು ಹಾಗೂ 2022-23ನೇ ಸಾಲಿನ ಆಯವ್ಯಯ ಸಂಪುಟ-III ರಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ ಲೆಕ್ಕಶೀರ್ಷಿಕೆ:2402-00-102-0-30 (ಕೇಂದ್ರದ ಪಾಲು) ಮತ್ತು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ ಲೆಕ್ಕಶೀರ್ಷಿಕೆ: 2402-00-102-0-33 (ರಾಜ್ಯದ ಪಾಲು) ಎಂದು ನಮೂದಿಸಲಾಗಿದ್ದು, ಈ ಯೋಜನೆಯ ಹೆಸರನ್ನು ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ 2.0 (PMKSY-WDC 2.0) ಎಂದು ಬದಲಾವಣೆ ಮಾಡಲು ಹಾಗೂ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ ಘಟಕ ಲೆಕ್ಕಶೀರ್ಷಿಕೆ: 2402-00-102-0-32 (ರಾಜ್ಯದ ಪಾಲು) ಇದನ್ನು ಪ್ರಧಾನ

..5

Scanned by CamScanner

ಮಂತ್ರಿ ಕೃಷಿ ಸಿಂಚಯಿ ಯೋಜನೆ-ಪರ್ ಡ್ರಾಪ್ ಮೋರ್ ಕ್ರಾಪ್-ಇತರೆ ಉಪಚಾರಗಳು (PMKSY-PDMC-OI) ಎಂದು ಬದಲಾವಣೆ ಮಾಡುವಂತೆ ಕೋರಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (15) ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಕೃಷಿ ಇಲಾಖೆ ರವರು 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ರಾಜ್ಯವಲಯದ ವಿವಿಧ ಯೋಜನಾ ಕಾರ್ಯಕ್ರಮಗಳನ್ನು 2022-23ನೇ ಸಾಲಿಗೆ ಮುಂದುವರೆಸಲು ಹಾಗೂ ಕೃಷಿ ಇಲಾಖೆಯ ಖಾಯಂ ಆಗದ ರಾಜ್ಯವಲಯದ ಕಾರ್ಯಕ್ರಮಗಳಡಿ ಇರುವ 1790 ಹುದ್ದೆಗಳನ್ನು ಹಾಗೂ ಅಂತರಗಂಗಾ ಸೂಕ್ಷ್ಮ ನೀರಾವರಿ ನಿಗಮಕ್ಕಾಗಿ 5 ಹುದ್ದೆಗಳನ್ನು ಸಹ ಮುಂದುವರೆಸಬೇಕಾಗಿರುತ್ತದೆಂದು ತಿಳಿಸಿರುತ್ತಾರೆ.

ಮುಂದುವರೆದು, 2022-23ನೇ ಸಾಲಿನಲ್ಲಿ ಮುಂದುವರೆಸಲು ಕೋರುತ್ತಿರುವ ಎಲ್ಲಾ ಯೋಜನೆಗಳ ಅನುಷ್ಠಾನಕ್ಕಾಗಿ (ಗ್ರ್ಯಾಂಟ್ ಇನ್ ಏಡ್ ಸೇರಿದಂತೆ) ಹೊರಗಿನ ಸಂಘ ಸಂಸ್ಥೆಗಳಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕೃಷಿ ಆಯುಕ್ತರು ಹಾಗೂ ಕೃಷಿ ನಿರ್ದೇಶಕರು ಇವರುಗಳಿಗೆ ನೀಡಲಾಗಿರುವ ಆರ್ಥಿಕ ಅಧಿಕಾರದ ಪರಿಮಿತಿಯೊಳಗೆ ಮಾತ್ರ ಬಿಡುಗಡೆ ಮಾಡುವ ಅಧಿಕಾರವನ್ನು ನೀಡುವಂತೆ ಹಾಗೂ "ಸಮಿತಿಗಳು ಹಾಗೂ ಸಮಾಲೋಚನೆ" ಯೋಜನೆಯಡಿಯಲ್ಲಿನ ಸಮಿತಿಗಳ ಸಭೆಗಳಿಗೆ ಅಗತ್ಯಕ್ಕೆ ಅನುಗುಣವಾಗಿ ಒದಗಿಸುವ ಲಘು ಉಪಹಾರ, ಕಾಫಿ/ಟೀ ಗೆ ತಗಲುವ ವೆಚ್ಚದ ಬಿಲ್ಲುಗಳನ್ನು ಪಾವತಿಸುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡುವಂತೆ ಮತ್ತು ಜೊತೆಗೆ ಹೊರಗಿನ ಸಂಘ ಸಂಸ್ಥೆಗಳು ಹಾಗೂ ಕೃಷಿ ವಿಶ್ವ ವಿದ್ಯಾನಿಲಯಗಳು ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ಆಯುಕ್ತರಿಗೆ ನೀಡುವಂತೆ ಕೋರುತ್ತಾ, ಯೋಜನೆಗಳನ್ನು ಮಂಜೂರು ಮಾಡುವಾಗ ಪ್ರಸ್ತಾವನೆಗಳಲ್ಲಿ ಸೂಚಿಸಿರುವ ಹುದ್ದೆಗಳನ್ನೂ ಸಹ ಮುಂದುವರೆಸಲು ಮಂಜೂರಾತಿ ನೀಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಲ್ಲಿ 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಎಲ್ಲಾ ಯೋಜನೆಗಳನ್ನು 2022-23ನೇ ಸಾಲಿಗೆ ಮುಂದುವರೆಸಲು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 114 ಕೃಯೋಕಾ 2022,**

**ಬೆಂಗಳೂರು, ದಿನಾಂಕ:08-04-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಕೃಷಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯ ರಾಜ್ಯ ವಲಯ ಯೋಜನೆಗಳು,

..6

Scanned by CamScanner

ಕೇಂದ್ರ ಪುರಸ್ಕೃತ ಯೋಜನೆಗಳು ಮತ್ತು ಬಾಹ್ಯಾನುದಾನಿತ ಯೋಜನೆಗಳನ್ನು ಅನುಬಂಧ-1 ಮತ್ತು ಅನುಬಂಧ-2ರಲ್ಲಿ ನಮೂದಿಸಿರುವಂತೆ 2022-23ನೇ ಸಾಲಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮುಂದುವರೆಸಿ ಆದೇಶಿಸಿದೆ.

<u>ಷರತ್ತುಗಳು:</u>

1. ಮುಂದುವರೆಸಲಾದ ಯೋಜನೆಗಳಲ್ಲಿ ಖರೀದಿ/ಸೇವೆಗೆ ಸಂಬಂಧಿಸಿದ ಯೋಜನೆಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳನ್ನು ಅನುಸರಿಸಿ ಕ್ರಮವಹಿಸತಕ್ಕದ್ದು.
2. ಈ ಯೋಜನೆಗಳನ್ನು 2022-23ನೇ ಸಾಲಿನಲ್ಲಿ ನಿಗಧಿಪಡಿಸಿದ ಅನುದಾನಕ್ಕಿಂತ ಹೆಚ್ಚಿನ ವೆಚ್ಚವಾಗದಂತೆ ಅನುಷ್ಠಾನಗೊಳಿಸುವುದು.
3. ಗಣಕಯಂತ್ರಗಳ ಖರೀದಿಗೆ ಸಂಬಂಧಿಸಿದಂತೆ ನಿಯಮಾನುಸಾರ ಮಾಹಿತಿ ತಂತ್ರಜ್ಞಾನ ಇಲಾಖೆಯ ಅನುಮೋದನೆ, ತಂತ್ರಿಕ ಸಲಹಾ ಪ್ಯಾನಲ್ (TAP) ಅನುಮೋದನೆ ಪಡೆದು ಜಾರಿಗೊಳಿಸುವುದು ಮತ್ತು ಇ-ಆಡಳಿತ ಇಲಾಖೆಯು ಕಾಲಕಾಲಕ್ಕೆ ಹೊರಡಿಸುವ ಆದೇಶ/ಸೂಚನೆಗಳನ್ವಯ ಖರೀದಿಸುವುದು.
4. 2022ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡದ ಉಪಯೋಜನೆಗಳಿಗೆ ಒದಗಿಸಲಾದ ಅನುದಾನದ ವಾರ್ಷಿಕ ಕ್ರಿಯಾ ಯೋಜನೆಗೆ ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿನ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಅನುಮೋದನೆ ಪಡೆದು ಅನುಷ್ಠಾನಗೊಳಿಸುವುದು.
5. 2022ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ತಾಲ್ಲೂಕುವಾರು ಕ್ರಿಯಾಯೋಜನೆಯನ್ನು ರೂಪಿಸಿ, ಯೋಜನಾ ಇಲಾಖೆಯ ಅನುಮೋದನೆ ಪಡೆದು ಅನುಷ್ಠಾನಗೊಳಿಸುವುದು.
6. ಕೇಂದ್ರ ವಲಯ ಯೋಜನೆಗಳಡಿ 2021-22ನೇ ಸಾಲಿನ ಅಂತ್ಯದವರೆಗೆ ಬಳಕೆಯಾದ ಅನುದಾನದ ಬಗ್ಗೆ ಕೇಂದ್ರ ಸರ್ಕಾರಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸಿ, ಉಳಿದಿರುವ ಅನುದಾನದ ಮರು ಮೌಲ್ಯೀಕರಣ ಮಂಜುರಾತಿಯನ್ನು ಏಪ್ರಿಲ್ ತಿಂಗಳಿನ ಅಂತ್ಯದೊಳಗಾಗಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸುವುದು.
7. ಕೇಂದ್ರ ನೆರವಿನ ಯೋಜನೆಗಳ ವಾರ್ಷಿಕ ಕ್ರಿಯಾ ಯೋಜನೆಗಳನ್ನು ರೂಪಿಸಿ ಕೇಂದ್ರ ಸರ್ಕಾರದ ಅನುಮೋದನೆ ಪಡೆದು ಅನುಷ್ಠಾನಗೊಳಿಸುವುದು. ಈ ಸಂಬಂಧ ರಾಜ್ಯಮಟ್ಟದ

..7

Scanned by CamScanner

ಅಧಿಕಾರಯುಕ್ತ ಸಮಿತಿಗಳ ಸಭೆಯಲ್ಲಿ ಕಾರ್ಯಕ್ರಮದ ರೂಪುರೇಷೆಗಳು ಹಾಗೂ ಆರ್ಥಿಕ ಗುರಿಗಳ ಬಗ್ಗೆ ಅನುಮೋದನೆ ಪಡೆಯುವುದು.

8. ಆಯವ್ಯಯ ಘೋಷಣೆಯ ಹೊಸ ಯೋಜನೆಗಳಿಗೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆ ಮತ್ತು ಯೋಜನಾ ಇಲಾಖೆಯ ಅನುಮೋದನೆ ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್.ಡಿ 01 ಬಿಪಿಇ 2022, ದಿನಾಂಕ:01-04-2022ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

08/04/2022
(ಪಿ. ಸತ್ಯಭಾಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).

08/04/22

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿಎಸ್ಎಸ್ಎ)/(ಇಆರ್ಎಸ್ಎ) (ಎ&ಇ), ಆಡಿಟ್ ಭವನ, ಬೆಂಗಳೂರು-1
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಕೃಷಿ ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-1.
5. ಆಯುಕ್ತರು/ನಿರ್ದೇಶಕರು, ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ವಿಭಾಗ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಕಡತ.



Scanned by CamScanner